ಮಾದಕ ವಸ್ತು ಮಾರಾಟ: ಇಬ್ಬರ ಬಂಧನ

ರಾಮನಗರ: ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದ ಇಬ್ಬರನ್ನು ಬಂಧಿಸಿರುವ ರಾಮನಗರ ಗ್ರಾಮಾಂತರ ಠಾಣೆ ಪೊಲೀಸರು 2 ಕೆಜಿ, 70 ಗ್ರಾಂ ತೂಕದ ಮಾದಕ ವಸ್ತು ಹಾಗೂ ಕೃತ್ಯಕ್ಕೆ ಬಳಕೆ ಮಾಡಿದ ಕಾರನ್ನು ವಶ ಪಡಿಸಿಕೊಂಡಿದ್ದಾರೆ. ತಾಲೂಕಿನ ಮಂಚಶೆಟ್ಟಿಹಳ್ಳಿ ಗ್ರಾಮದ ಬಳಿ ಮಾದಕ ವಸ್ತುವೊಂದನ್ನು ಮಾರಾಟ ಮಾಡುತ್ತಿರುವ ಬಗ್ಗೆ ದೊರೆತ ಖಚಿತ ಮಾಹಿತಿ ಮೇರೆಗೆ ಪೊಲೀಸರು ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ. ಈ ಸಂಬಂಧ ರಾಮನಗರ ಗ್ರಾಮಾಂತರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಕುಡಿವ ನೀರಿಗೆ ಸಮಸ್ಯೆಯಾಗದಂತೆ ಕ್ರಮವಹಿಸಿ

ಬೇಸಿಗೆಯಲ್ಲಿ ಸಮಸ್ಯೆ ನಿರ್ವಹಣೆಗೆ ಸನ್ನದ್ಧರಾಗಿ: ಯೋಗೇಶ್ವರ್ | ಕುಡಿಯುವ ನೀರಿನ ಸಮಸ್ಯೆಗೆ ಸಂಬಂಧಿಸಿ ಸಭೆ

• **ಕನ್ನಡಪ್ರಭ ವಾರ್ತೆ** ಚನ್ನಪಟ್ಟಣ

ಮುಂದಿನ ತಿಂಗಳಿನಿಂದ ಬೇಸಿಗೆಯ ತಾಪ ಇನ್ನಷ್ಟು ಹೆಚ್ಚಾಗಲಿದ್ದು, ತಾಲೂಕಿನಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಯಾಗದಂತೆ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಶಾಸಕ ಸಿ.ಪಿ.ಯೋಗೇಶ್ವರ್‌ತಾಕೀತು ಮಾಡಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಸಂಬಂಧ ಕರೆಯಲಾಗಿದ್ದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಸಕಾಲಕ್ಕೆ ಉತ್ತಮ ಮಳೆಯಾದರೆ ಯಾವುದೇ ಸಮಸ್ಯೆ ಯಾಗುವುದಿಲ್ಲ. ಮಳೆಯೇನಾದರೂ ಕೈಕೊಟ್ಟರೆ ಕುಡಿಯುವ ನೀರಿಗೂ ಸಮಸ್ಯೆ ಉದ್ಭವಿಸಲಿದ್ದು, ಇದನ್ನು ಪರಿಹರಿಸಲು ಅಧಿಕಾರಿಗಳು ಈಗಿನಿಂದಲೇ ಸನ್ನದ್ಧರಾಗುವಂತೆ ಸೂಚಿಸಿದರು.

ಹಾಲು ಪೂರೈಕೆಯಲ್ಲಿ ತಾಲೂಕು ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದೆ. ತಾಲೂಕಿನಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ರಾಸುಗಳು ಇವೆ. ಜನರಿಗೆ ಕುಡಿಯುವ ನೀರಿನ ಜತೆಗೆ ದಿನಬಳಕೆಗೂ ನೀರಿನ ಅಗತ್ಯತೆ ಇದೆ. ಈ ಹಿನ್ನೆಲೆಯಲ್ಲಿ ಯಾವ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಲ್ಬಣಗೊಳ್ಳುವ ಸಾಧ್ಯತೆ ಇದೆಯೋ, ಅಲ್ಲೆಲ್ಲಾ ಪರ್ಯಾಯ ವ್ಯವಸ್ಥೆಕಲ್ಪಿಸಿ. ನೀರಿಗೆ ಯಾವುದೇ ರೀತಿಯ ಸಮಸ್ಯೆ ಯಾಗದಂತೆ ಮುಂಜಾಗ್ರತೆ ವಹಿಸಿ ಎಂದು ಸೂಚಿಸಿದರು.

ಆರ್.ಒ.ಪ್ಲಾಂಟ್‌ಗಳನ್ನುಸುಪರ್ಧಿಗೆತೆಗೆದುಕೊಳ್ಳಿ: ತಾಲೂಕಿನಲ್ಲಿರುವ ಬಹುತೇಕ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸರಿಯಾಗಿ ನಿರ್ವಹಣೆಮಾಡುತ್ತಿಲ್ಲ. ನೀರು ಸರಿಯಾಗಿ ಶುದ್ಧೀಕರಣವಾಗುತ್ತಿಲ್ಲ, ಕೆಟ್ಟುನಿಂತ ಘಟಕಗಳ ದುರಸ್ತಿಯಾಗುತ್ತಿಲ್ಲವೆಂಬ ಆರೋಪಗಳು ಕೇಳಿ ಬರುತ್ತಿವೆ. ಸಂಸ್ಥೆಗಳು ನಿರ್ಮಿಸಿರುವ ಆರ್‌ಒ ಘಟಕಗಳನ್ನು ಹೊರತು ಪಡಿಸಿ ಮಿಕ್ಕುಳಿದ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಯನ್ನು ಖಾಸಗಿಯವರ ಸುಪರ್ದಿಯಿಂದ ಬಿಡಿಸಿ ಗ್ರಾಮ ಪಂಚಾಯಿತಿಗಳೇ ವಹಿಸಿಕೊಳ್ಳಬೇಕು. ಯಾವುದೇ ಸಬೂಬು ಹೇಳದೇ ಕುಡಿಯುವ ನೀರಿನ ಘಟಕಗಳನ್ನು ಗ್ರಾಪಂಗಳೇ ನಿರ್ವಹಣೆ ಮಾಡಬೇಕು ಎಂದು ತಾಕೀತು ಮಾಡಿದರು.

ಅಧಿಕಾರಿಗಳ ವಿರುದ್ಧ ಗರಂ: ಸಭೆಯ ಮಧ್ಯದಲ್ಲಿ ಗ್ರಾಪಂ ಸದಸ್ಯರೊಬ್ಬರು ಶುದ್ಧ ಕುಡಿಯುವ ನೀರಿನ ಘಟಕದಲ್ಲಿನ ಕಲುಷಿತ ನೀರನ್ನು ತಂದು ತೋರಿಸಿದರು. ಇದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿದ ಶಾಸಕರು, ನೀರಿನ ಶುದ್ಧತೆಯನ್ನು ಕಾಲಕಾಲಕ್ಕೆ ಪರೀಕ್ಷೆ ನಡೆಸಿ ಯಾವುದೇ ಸಮಸ್ಯೆ ಯಾಗದಂತೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು.

ಹಾರೊಕೊಪ್ಪ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಾಜ್ಯಪಾಲರ ಹೆಸರಿನಲ್ಲಿರುವ ಸರ್ಕಾರಿ ಭೂಮಿಯಲ್ಲಿ ಖಾಸಗಿ ವ್ಯಕ್ತಿಯೊಬ್ಬರು ಸ್ವಾಧೀನದಲ್ಲಿದ್ದರೂ, ಅದನ್ನು ಸುಪರ್ದಿಗೆ ಪಡೆಯದ ಪಿಡಿಒ ವಿರುದ್ಧ ಆರೋಪ ಕೇಳಿಬಂದಾಗ ಗರಂ ಆದ ಶಾಸಕರು, ಸರ್ಕಾರಿ ಆಸ್ತಿ ಉಳಿಸುವುದು ನಿಮ್ಮ ಕೆಲಸವಲ್ಲವೇ ಎಂದು ಹರಿಹಾಯ್ದರು. ಈ ಕೂಡಲೇ ಆ ಜಾಗವನ್ನು ವಶಕ್ಕೆ ಪಡೆದು ಸಂಬಂಧಪಟ್ಟ ಇಲಾಖೆಗೆ ಹಸ್ತಾಂತರಿಸುವಂತೆ ತಾಕೀತು ಮಾಡಿದರು.

ಸೋಗಾಲ ಗ್ರಾಮದಲ್ಲಿ ಸರಕಾರಿ ಹಳ್ಳವನ್ನು ಖಾಸಗಿ ವ್ಯಕ್ತಿಯೊಬ್ಬರಿಗೆ ಬಿ ಖಾತಾ ಮಾಡಿಕೊಟ್ಟಿರುವ ಪಿಡಿಒ ವಿರುದ್ಧ ಗರಂ ಆದ ಶಾಸಕರು ನೀವೆಲ್ಲಾ ಏನು ಕೆಲಸ ಮಾಡುತ್ತೀರಾ, ಎಲ್ಲವನ್ನೂ ನಾವು ಹೇಳಿಯೇ ಮಾಡಿಸಬೇಕಾ, ಸರಕಾರ ನಿಮಗೆ ಸಂಬಳ ಕೊಡುವುದಾದರೂ ಯಾಕೆಂದು ಆಕ್ರೋಶ ವ್ಯಕ್ತ ಪಡಿಸಿದರು. ಮುಂದಿನ ಸಭೆಯೊಳಗೆ ಈ ಎಲ್ಲಾ ಸಮಸ್ಯೆಗಳೂ ಬಗೆಹರಿದಿರಬೇಕೆಂದು ಗಡುವು ನೀಡಿದರು.

ಇದೇ ವೇಳೆ ಶಾಸಕರು ತಾಲೂಕಿನ ಎಲ್ಲ 32 ಗ್ರಾಪಂ ಪಿಡಿಒಗಳಿಂದ ತಮ್ಮ ವ್ಯಾಪ್ತಿಯಲ್ಲಿನ ನೀರಿನ ಸಮಸ್ಯೆ, ಬೇಸಿಗೆ ನಿರ್ವಹಣೆಗೆ ತೆಗೆದುಕೊಂಡಿರುವ ಕ್ರಮಗಳ ಕುರಿತು ಮಾಹಿತಿ ಪಡೆದುಕೊಂಡರು. ಸಭೆಯಲ್ಲಿ ತಹಸೀಲ್ದಾರ್‌ನರಸಿಂಹಮೂರ್ತಿ, ತಾಪಂ ಇಒ ಸಂದೀಪ್, ನಗರಸಭೆ ಅಧ್ಯಕ್ಷ ವಾಸಿಲ್ ಅಲಿಖಾನ್, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಚಂದ್ರಶೇಖರ್, ಕಾವೇರಿ ನೀರಾವರಿ ನಿಗಮದ ಅಧಿಕಾರಿ ಶಿವಕುಮಾರ್‌ಇದ್ದರು.

ಜೆಜೆಎಂ ಕಾಮಗಾರಿ ಕುರಿತು ಶಾಸಕರ ಅಸಮಾಧಾನ

ಜಲಜೀವನ್ ಮಿಷನ್ ಯೋಜನೆಯಲ್ಲಿ ಸರಿಯಾಗಿ ಕೆಲಸ ಮಾಡಿದ್ದರೆ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯೇ ಇರುತ್ತಿರಲಿಲ್ಲ. ಕೋಟ್ಯಾಂತರ ರು. ವೆಚ್ಚ ಮಾಡಿಯೂ ಸಹ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದೇ ಅಧ್ವಾನ ಮಾಡಿದ ಕಾರಣ ಸಮಸ್ಯೆ ಯಾಗಿದೆ ಎಂದು ಶಾಸಕ ಸಿ.ಪಿ.ಯೋಗೇಶ್ವರ್‌ಅಸಮಾಧಾನ ವ್ಯಕ್ತಪಡಿಸಿದರು.

ತಾಲೂಕಿನಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ರಸ್ತೆಗಳನ್ನು ಬಗೆದು ಪೈಪ್‌ಗಳನ್ನು ಒಡೆದು ಹಾಕಿರುವ ಪರಿಣಾಮ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ನೀರಿನ ಸಮಸ್ಯೆ ಕಂಡು ಬರುತ್ತಿದೆ. ಇದರಿಂದ ಸರ್ಕಾರದ ಬೊಕ್ಕಸಕ್ಕೆ ಸಾಕಷ್ಟು ನಷ್ಟ ಉಂಟಾಗಿದೆ. ಕಳಪೆ ಕೆಲಸದ ಜೊತೆಗೆ ಅಪೂರ್ಣ ಕಾಮಗಾರಿ ಮಾಡಿರುವ ಗುತ್ತಿಗೆದಾರರನ್ನು ಕರೆಸಿ ಕೆಲಸ ಮುಗಿಸುವಂತೆ ಸೂಚಿಸಿ, ಹಾಗೊಂದು ವೇಳೆ ಕಾಮಗಾರಿ ಮುಗಿಸದಿದ್ದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕೆಲವು ಗ್ರಾಮಗಳಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳನ್ನೇ ನಿರ್ಮಿಸಿಲ್ಲ ಎಂಬ ದೂರುಗಳಿವೆ. ಈ ಕುರಿತು ಕ್ರಮ ವಹಿಸುವಂತೆ ಇಒಗೆ ಸೂಚಿಸಿದರು.

ಆನಂದಸ್ವಾಮಿ, ಸುರೇಶ್‌ಗೆ ಅಭಿನಂದನೆ

• **ಕನ್ನಡಪ್ರಭ ವಾರ್ತೆ** ರಾಮನಗರ

ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಎರಡನೇ ಬಾರಿಗೆ ಆಯ್ಕೆಯಾದ ಆನಂದಸ್ವಾಮಿ ಮತ್ತು ರಾಜ್ಯ ಪರಿಷತ್ ಸದಸ್ಯರಾಗಿ ಆಯ್ಕೆಯಾದ ಆರ್.ವಿ. ಸುರೇಶ್ ಅವರನ್ನು ವಿವಿಧ ಮೋರ್ಚಾ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಮಂಗಳ ವಾರ ಗೌರವಿಸಿ, ಅಭಿನಂದನೆ ಸಲ್ಲಿಸಿದರು.

ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ಸುಭದ್ರ ದೇಶ ಕಟ್ಟುವ ಸಿದ್ಧಾಂತವಿರಿಸಿಕೊಂಡಿರುವ ಬಿಜೆಪಿ ಪಕ್ಷದಲ್ಲಿ ಜವಾಬ್ದಾರಿ ವಹಿಸಿಕೊಂಡು ಪಕ್ಷ ಕಟ್ಟುವ ಕೆಲಸ ಒಂದು ಪುಣ್ಯದ ಕೆಲಸವಾಗಿದೆ ಎಂದರು.

ನಮ್ಮ ಪಕ್ಷದ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ಅವರು ನನ್ನ ಪಕ್ಷದ ನಿಷ್ಠೆಯನ್ನು ಗುರುತಿಸಿ ಎರಡನೇ ಬಾರಿಗೆ ಜಿಲ್ಲಾಧ್ಯಕ್ಷನನ್ನಾಗಿ ಆಯ್ಕೆ ಮಾಡಿದ್ದಾರೆ. ಅವರ ನಂಬಿಕೆಯನ್ನು ಹುಸಿಗೊಳಿಸದೆ ಜಿಲ್ಲೆಯ ಐದು ತಾಲೂಕುಗಳಲ್ಲಿ ಬಿಜೆಪಿ ಪಕ್ಷವನ್ನು ಸಂಘಟಿಸುವ ಪಣತೊಟ್ಟಿದ್ದೇನೆ ಎಂದರು. ಬಿಜೆಪಿ ಪಕ್ಷದಲ್ಲಿ ಕಾರ್ಯಕರ್ತರು ಹುದ್ದೆಗಳಿಗೆ ಜೋತು ಬೀಳದೆ ಪಕ್ಷದಲ್ಲಿ ಗುರುತಿಸಿಕೊಂಡರೆ ಒಂದಲ್ಲಾ ಒಂದು ದಿನ ತಮಗೆ ಜವಾಬ್ದಾರಿ ಸ್ಥಾನಗಳು ಸಿಗಲಿವೆ. ಪಕ್ಷದ ಹಿರಿಯರ ಮಾರ್ಗದರ್ಶನದಲ್ಲಿ ಕಾರ್ಯಕರ್ತರಲ್ಲಿ ಭಿನ್ನಾಭಿಪ್ರಾಯ ಬಂದರೆ ನಾವೇ ಕುಳಿತು ಸಮಸ್ಯೆ ಬಗೆಹರಿಸಿಕೊಳ್ಳೋಣ, ನಮಗೆ ಸಂಸದರಾಗಿ ಡಾ.ಸಿ.ಎನ್. ಮಂಜುನಾಥ್ ನಾಯಕರಾಗಿದ್ದು, ಪಕ್ಷ ಬಲಪಡಿಸಲು ಸಹಕಾರಿಯಾಗಲಿದೆ ಎಂದು ಆನಂದಸ್ವಾಮಿ ಹೇಳಿದರು.

ಬಿಜೆಪಿ ರಾಜ್ಯ ಪರಿಷತ್ತು ಸದಸ್ಯ ಆರ್.ವಿ.ಸುರೇಶ್ ಮಾತನಾಡಿ, ಬಿಜೆಪಿ ಪಕ್ಷ ನೀಡಿ ರುವ ಜವಾಬ್ದಾರಿ ನನಗೆ ಸಂತಸ ತಂದಿದೆ. ಪಕ್ಷದ ಎಲ್ಲಾ ಮೋರ್ಚಾಗಳ ಸಹಕಾರವಿರಲಿ ಎಂದರು. ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಜಗದೀಶ್, ಹಿಂದುಳಿದ ಮೋರ್ಚಾದ ಅಧ್ಯಕ್ಷ ಸುರೇಶ್, ವೆಂಕಟರಮಣಪ್ಪ, ಕಾಳಪ್ಪ, ಆನಂದ್, ಭಾನು ಪ್ರಕಾಶ್, ನಾಗಮ್ಮ ಮಾತನಾಡಿ, ಪಕ್ಷವನ್ನು ಸದೃಢವಾಗಿ ಕಟ್ಟಲು ಅವರ ಬೆಂಬಲಕ್ಕೆ ನಿಲ್ಲುತ್ತೇವೆ ಎಂದು ಹೇಳಿದರು. ಬಿಜೆಪಿ ಸಹ ವಕ್ತಾರ ರುದ್ರದೇವರು, ಜಿಲ್ಲಾ ಉಪಾಧ್ಯಕ್ಷ ಶಿವಾ ನಂದ, ಎಸ್ಸಿ/ಎಸ್ಟಿ ಮೋರ್ಚಾ ಮಾಜಿ ಅಧ್ಯಕ್ಷ ರಾಜು, ಬಿಜೆಪಿ ವಕ್ತಾರ ಚೇತನ್, ರಾಘು, ಉಮೇಶ್, ನಾರಾಯಣಸ್ವಾಮಿ, ಜೆಡಿಎಸ್ ಮುಖಂಡರಾದ ಜಯ್ ಕುಮಾರ್, ಕೆಂಪರಾಜು ಸೇರಿದಂತೆ ಬಿಜೆಪಿಯ ವಿವಿಧ ಮೋರ್ಚಾ ಅಧ್ಯಕ್ಷರು, ಪದಾಧಿಕಾರಿಗಳು ಹಾಜರಿದ್ದು ಅಭಿನಂದಿಸಿದರು.

> **ಎಲ್ಲರೂ ಒಗ್ಗೂಡಿ ಕೆಲಸ ಮಾಡಿದರೆ 5 ತಾಲೂಕುಗಳಲ್ಲಿ ಸದೃಢವಾಗಿ ಬಿಜೆಪಿ ಪಕ್ಷವನ್ನು ಸಂಘಟಿ ಸಬಹುದು. ನೀವು ನನ್ನ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ನಾನು ಚಿರಋಣಿ, ನಿಮ್ಮ ಸಹಕಾರವನ್ನು ನಿರೀಕ್ಷಿಸುತ್ತೇನೆ. ಮುಂಬರುವ ಜಿಪಂ - ತಾಪಂ ಚುನಾವಣೆಗಳು ನಮಗೆ ಸವಾಲಾಗಿದ್ದು, ಒಗ್ಗಟ್ಟಿನಿಂದ ಎದುರಿಸಲು ಬೂತ್ ಮಟ್ಟದಿಂದ ಪಕ್ಷ ಸಂಘಟಿಸಲು ಅಣಿಯಾಗಬೇಕು.**
>
> • **ಆನಂದಸ್ವಾಮಿ,** ಜಿಲ್ಲಾಧ್ಯಕ್ಷರು, ಬಿಜೆಪಿ.

ಡಿಕೆ ಶಿವಕುಮಾರ್ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

ಸಂವಿಧಾನ ಬದಲಾವಣೆ ಹೇಳಿಕೆಗೆ ಬಿಜೆಪಿ ಕಾರ್ಯಕರ್ತರ ಖಂಡನೆ, ಉಪ ಮುಖ್ಯಮಂತ್ರಿಗಳ ವಿರುದ್ಧ ಧಿಕ್ಕಾರ ಘೋಷಣೆ

• **ಕನ್ನಡಪ್ರಭವಾರ್ತೆ** ಚನ್ನಪಟ್ಟಣ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ 'ಸಂವಿಧಾನಬದಲಾವಣೆ' ಹೇಳಿಕೆ ಖಂಡಿಸಿ ತಾಲೂಕು ಬಿಜೆಪಿ ಘಟಕದಿಂದ ನಗರದ ಬಸ್ ನಿಲ್ದಾಣದ ಬಳಿ ಪ್ರತಿಭಟನೆ ನಡೆಸಲಾಯಿತು.

ಮಂಗಳವಾರ ಬೆಂ- ಮೈಸೂರು ಹೆದ್ದಾರಿಯಲ್ಲಿರುವ ನಗರದ ಬಸ್ ನಿಲ್ದಾಣದ ಬಳಿ ಜಮಾಯಿಸಿದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಡಿಸಿಎಂ ಡಿ.ಕೆ.ಶಿವಕುಮಾರ್‌ಹೇಳಿಕೆ ಖಂಡಿಸಿ ಅವರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಸಂವಿಧಾನ ಬದಲಾವಣೆಯ ಕುರಿತು ಹೇಳಿಕೆ ನೀಡಿರುವ ಡಿಕೆಶಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಎನ್.ಆನಂದಸ್ವಾಮಿ

ಮಾತನಾಡಿ, ಸಂವಿಧಾನದತ್ತ ಹುದ್ದೆಯಲ್ಲಿರುವ ಡಿಸಿಎಂ ಡಿ.ಕೆ. ಶಿವಕುಮಾರ್‌ಸಂವಿಧಾನ ಬದಲಾವಣೆಯ ಕುರಿತು ಉದ್ಧಟನದ ಹೇಳಿಕೆ ನೀಡಿದ್ದಾರೆ. ಅವರ ಈ ಹೇಳಿಕೆಯನ್ನು ಬಿಜೆಪಿ ತಾಲೂಕು ಘಟಕ ಖಂಡಿಸುತ್ತದೆ. ಸಂವಿಧಾನ ಬದಲಾವಣೆಯ ಹೇಳಿಕೆ ನೀಡಿರುವ ಅವರು, ತಮ್ಮ ಸಚಿವ ಸ್ಥಾನಕ್ಕೆ ಈ ಕೂಡಲೇ ರಾಜೀನಾಮೆ ನೀಡಬೇಕು. ಕಾಂಗ್ರೆಸ್‌ಗೆ ಸಂವಿಧಾನದ ಮೇಲೆ ಗೌರವಿದ್ದರೆ ಅವರನ್ನು ಸಂಪುಟದಿಂದ ಈ ಕೂಡಲೇ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ ಡಿ.ಕೆ.ಶಿವಕುಮಾರ್ ಮಾತನಾಡಿದ್ದಾರೆ. ಅವರ ಹೇಳಿಕೆ ಖಂಡಿಸಿ ಇಂದು ರಾಜ್ಯಾದ್ಯಂತ ಸಾಂಕೇತಿಕವಾಗಿ ಪ್ರತಿಭಟನೆ ನಡೆಸಲಾಗಿದೆ. ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಬಿಜೆಪಿ ಮುಖಂಡರಾದ ಕೆ.ಟಿ. ಜಯರಾಮು, ಚೇತನ್, ಸಂತೋಷ್, ವಿಶಕಂಠು ಇತರರು ಇದ್ದರು.

ರಾಮನಗರದಲ್ಲೂ ಬಿಜೆಪಿ ಪ್ರತಿಭಟನೆ

ರಾಮನಗರದ ಐಜೂರು ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ಡಿಸಿಎಂ ಡಿಕೆಶಿ ವಿರುದ್ಧ ಪ್ರತಿಭಟನೆ ನಡೆಸಿದರು.

ರಾಮನಗರ: ಸಂವಿಧಾನ ತಿದ್ದುಪಡಿ ಹೇಳಿಕೆ ನೀಡಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ವಿರುದ್ಧ ಬಿಜೆಪಿ- ಜೆಡಿಎಸ್ ಮೈತ್ರಿ ಪಕ್ಷಗಳ ಮುಖಂಡರು ಪ್ರತಿಭಟನೆ ನಡೆಸಿದರು. ನಗರದ ಐಜೂರು ವೃತ್ತದಲ್ಲಿ ಬಿಜೆಪಿ ಮುಖಂಡರು ಸಂವಿಧಾನ ವಿರೋಧಿ ಕಾಂಗ್ರೆಸ್ ಸರ್ಕಾರ ಮತ್ತು ದಲಿತ ವಿರೋಧಿ ಡಿ.ಕೆ.ಶಿವಕುಮಾರ್‌ಎಂದು ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಪಿಚ್ಚನಕೆರೆ ಜಗದೀಶ್ ಮಾತನಾಡಿ, ವೋಟ್ ಬ್ಯಾಂಕ್ ಗಾಗಿ ಅಲ್ಪಸಂಖ್ಯಾತರನ್ನು ಕಾಂಗ್ರೆಸ್ ಪಕ್ಷ ಓಲೈಸುವ ಮೂಲಕ ಡಾ.ಬಿ.ಆರ್. ಅಂಬೇಡ್ಕರ್‌ಅವರ ಸಂವಿಧಾನವನ್ನು ಬದಲಿಸುವ ಮಾತನಾಡಿರುವುದು ಖಂಡನೀಯ. ಇದು ಹೀಗೆ ಮುಂದುವರಿದರೆ ಕಾಂಗ್ರೆಸ್ ಪಕ್ಷ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಸಿದರು. ಬಿಜೆಪಿ ರಾಜ್ಯ ವಕ್ತಾರ ರುದ್ರದೇವರು, ಜೆಡಿಎಸ್ ತಾಲೂಕು ಅಧ್ಯಕ್ಷ ಸಬ್ಬಕೆರೆ ಶಿವಲಿಂಗಯ್ಯ ಮಾತನಾಡಿ, ಡಿಕೆಶಿ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿದರು. ನಗರ ಮಂಡಲ ಮಾಜಿ ಅಧ್ಯಕ್ಷ ಶಿವಾನಂದ, ನಾಗೇಶ್, ಜೈ ಕುಮಾರ್, ಕೆಂಪರಾಜು, ಚಿಕ್ಕೋನು,ಕಾಳಪ್ಪ, ಚನ್ನಪ್ಪ, ನಾಗಮ್ಮ, ನಗರಸಭಾ ಮಾಜಿ ಸದಸ್ಯ ನಾಗೇಶ್ ಮತ್ತಿತರರು ಭಾಗವಹಿಸಿದ್ದರು.

ಸಂವಿಧಾನ ಬದಲಾವಣೆ ಹೇಳಿಕೆ ಖಂಡನೀಯ: ಮಲ್ಲಿಕಾರ್ಜುನ್

• **ಕನ್ನಡಪ್ರಭ ವಾರ್ತೆ** ಕನಕಪುರ

ಡಿಸಿಎಂ ಡಿ.ಕೆ ಶಿವಕುಮಾರ್‌ರವರು ಶೇ.4ರಷ್ಟು ಧಾರ್ಮಿಕ ಮೀಸಲಾತಿಗಾಗಿ ಸಂವಿಧಾನವನ್ನೇ ಬದಲಾಯಿಸುವ ಹಾಗೂ ಸಂವಿಧಾನಕ್ಕೆ ತಿದ್ದುಪಡಿ ತರುವ ಹೇಳಿಕೆ ನೀಡಿರುವುದು ಖಂಡನೀಯ ಎಂದು ನಗರದ ಧಮ್ಮ ದೀವಿಗೆ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನ್ ಹೇಳಿದರು.

ಈ ಬಗ್ಗೆ ನಗರದಲ್ಲಿ ಪತ್ರಿಕಾ ಹೇಳಿಕೆ ನೀಡಿ, ಭಾರತ ದೇಶಕ್ಕೆ ದಿಕ್ಸೂಚಿ ಸಂವಿಧಾನ. ಬಹುತ್ವ ಭಾರತಕ್ಕೆ ಆಸರೆಯಾದ ಸಂವಿಧಾನದ ತಿರುಳನ್ನು ಅರಿಯದ ಕೆಲವು ರಾಜಕಾರಣಿಗಳು, ಸಂಸತ್ ಸದಸ್ಯರು, ಮುಖ್ಯಮಂತ್ರಿ, ಸಚಿವರು, ನ್ಯಾಯಾಧಿಪತಿಗಳು ಸಂವಿಧಾನವನ್ನೇ ಗುರಿಯಾಗಿಸಿಕೊಂಡು ಸಂವಿಧಾನ ಬದಲಾವಣೆ, ಪರಾಮರ್ಶೆ, ತಿದ್ದುಪಡ